ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪಂರಾ 212 ಜಿಪಸ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:23-06-2021.

**ಸುತ್ತೋಲೆ**

**ವಿಷಯ:** ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಆಡಳಿತಾಧಿಕಾರಿಗಳ ಅಧಿಕಾರಗಳು ಮತ್ತು ಕರ್ತವ್ಯಗಳು.

**ಉಲ್ಲೇಖ:**

1. ಸರ್ಕಾರದ ಆದೇಶದ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021, ದಿನಾಂಕ:26-04-2021.
2. ಸರ್ಕಾರದ ತಿದ್ದುಪಡಿ ಆದೇಶದ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021, ದಿನಾಂಕ:28-04-2021.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 239ರಡಿಯಲ್ಲಿ ಜಿಲ್ಲಾ ಪಂಚಾಯತಿಗೆ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದೆ. ಉಲ್ಲೇಖ(1) ಮತ್ತು (2)ರಲ್ಲಿ ಸರ್ಕಾರವು ಈಗಾಗಲೇ ಅವಧಿ ಪೂರ್ಣಗೊಂಡ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿ ಆದೇಶ ಹೊರಡಿಸಿದೆ. ಉಪ ಪ್ರಕರಣ 239(2)ರ ಪ್ರಕಾರ ಆಡಳಿತಾಧಿಕಾರಿಗಳು ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುವುದು.

1. ಅಧಿನಿಯಮದಡಿ ಅಥವಾ ಯಾವುದೇ ಇತರ ಕಾನೂನಿನ ಉಪಬಂಧಗಳನ್ನು ಕಾರ್ಯಗತಗೊಳಿಸುವಂತಹ ಹೊಣೆಯನ್ನು ಹೊತ್ತ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಅಧಿಕಾರಗಳನ್ನು ಚಲಾಯಿಸುವುದು.
2. ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಯ ಸ್ಥಾಯಿ ಸಮಿತಿಗಳು ಮತ್ತು ಇತರೆ ಸಮಿತಿಗಳ ಅಧಿಕಾರಗಳನ್ನು ಚಲಾಯಿಸತಕ್ಕದ್ದು.
3. ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಈ ಅಧಿನಿಯಮದಡಿ ಅಥವಾ ಇತರೆ ಕಾನೂನಿನ ಮೂಲಕ ಪ್ರಧಾನ ಮಾಡಬೇಕಾದಂತಹ ಕರ್ತವ್ಯಗಳಿಗೆ ಸಂಬಂಧಿಸಿದಂತಹ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

ಮುಂದುವರೆದು, ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಸಾಮಾನ್ಯ ಸಭೆ, ಸ್ಥಾಯಿ ಸಮಿತಿ ಸಭೆಗಳು ಮತ್ತು ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಎಲ್ಲಾ ಕರ್ತವ್ಯಗಳನ್ನು ಆಡಳಿತಾಧಿಕಾರಿಗಳು ನಿರ್ವಹಿಸತಕ್ಕದ್ದು.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ